# ಮಂಗಳೂರು ವಿಶ್ವವಿದ್ಯಾನಿಲಯ

(ನ್ಯಾಕ್ ನಿಂದ ಮಾನ್ಯತೆ ಹೊಂದಿದೆ)

ಸಂಖ್ಯೆ: MU/REG/DEV(D5)/M.Ed./2025-26

ಕುಲಸಚಿವರ ಕಛೇರಿ
ಮಂಗಳಗಂಗೋತ್ರಿ-574199
ದಿನಾಂಕ: 24.09.2025

## ಸಂದರ್ಶನ ತಿಳುವಳಿಕೆ ಪತ್ರ

ವಿಷಯ: 2025-26ನೇ ಸಾಲಿಗೆ ಮಂಗಳೂರು ವಿಶ್ವವಿದ್ಯಾನಿಲಯದ ಸ್ನಾತಕೋತ್ತರ ಎಂ.ಎಡ್. ಕಾರ್ಯಕ್ರಮಗಳಿಗೆ ಅಗತ್ಯವಿರುವ ಅತಿಥಿ ಉಪನ್ಯಾಸಕರ ನೇಮಕಾತಿ-ಸಂದರ್ಶನ ದಿನಾಂಕ ಮತ್ತು ಸಮಯ ನಿಗದಿಪಡಿಸುವ ಬಗ್ಗೆ.

ಉಲ್ಲೇಖ: ಈ ಕಛೇರಿ ಪ್ರಕಟಣೆ ದಿನಾಂಕ: 12.08.2025.

********

2025-26ನೇ ಸಾಲಿಗೆ ಮಂಗಳೂರು ವಿಶ್ವವಿದ್ಯಾನಿಲಯದ ಸ್ನಾತಕೋತ್ತರ ಎಂ.ಎಡ್. ಕಾರ್ಯಕ್ರಮಕ್ಕೆ(PG) ಅಗತ್ಯವಿರುವ ಅತಿಥಿ ಉಪನ್ಯಾಸಕರ ಸೇವೆಗೆ ಅಭ್ಯರ್ಥಿಗಳ ಆಯ್ಕೆಗೆ ಸಂಬಂಧಿಸಿ ಸಂದರ್ಶನವು **ದಿನಾಂಕ: 30.09.2025ರಂದು ಅಪರಾಹ್ನ 3.00 ಗಂಟೆಗೆ** ಮಂಗಳೂರು ವಿಶ್ವವಿದ್ಯಾನಿಲಯದ ಆಡಳಿತ ಸೌಧದ ಸಿಂಡಿಕೇಟು ಸಭಾಂಗಣದಲ್ಲಿ ನಡೆಯಲಿರುವುದು.

ಸೂಚನೆಗಳು:

1. ಸಂದರ್ಶನಕ್ಕೆ ಹಾಜರಾಗುವ ಅಭ್ಯರ್ಥಿಗಳು, ಕಡ್ಡಾಯವಾಗಿ ಎಲ್ಲಾ ಮೂಲ ದಾಖಲೆಗಳೊಂದಿಗೆ ನಿಗದಿತ ಸಮಯಕ್ಕಿಂತ ಒಂದು ಗಂಟೆ ಮುಂಚಿತವಾಗಿ ಹಾಜರಾಗತಕ್ಕದ್ದು.
2. ಪೂರ್ಣಕಾಲಿಕ ಬೋಧನಾ ಅವಧಿಯನ್ನು ವಾರಕ್ಕೆ 20 ಗಂಟೆಯೆಂದು ಪರಿಗಣಿಸುವುದು.
3. ಪೂರ್ಣಕಾಲಿಕ ಬೋಧನಾ ಅವಧಿ ಇದ್ದಲ್ಲಿ ಮಾಸಿಕ ಗರಿಷ್ಟ ರೂ. 40,000/-(UGC ನಿಗದಿಪಡಿಸಿದ ವಿದ್ಯಾರ್ಹತೆ ಹೊಂದಿರುವವರಿಗೆ ಮಾತ್ರ) ಮತ್ತು UGC ನಿಗದಿಪಡಿಸಿದ ವಿದ್ಯಾರ್ಹತೆ ಹೊಂದದವರಿಗೆ ಮಾಸಿಕ ಗರಿಷ್ಟ ರೂ. 35,000/- ಸಂಭಾವನೆ ಪಾವತಿ ಮಾಡಲಾಗುವುದು.
4. UGC ನಿಗದಿಪಡಿಸಿದ ವಿದ್ಯಾರ್ಹತೆ ಹೊಂದಿರುವವರಿಗೆ 16 ಗಂಟೆಗಿಂತ ಕಡಿಮೆ ಕಾರ್ಯಭಾರ/ 20 ಗಂಟೆಗಿಂತ ಕಡಿಮೆ ಕಾರ್ಯಭಾರ ಇದ್ದ ಪಕ್ಷದಲ್ಲಿ ಪ್ರತಿ ಗಂಟೆಯ ಬೋಧನಾ ಅವಧಿಗೆ ರೂ. 650/- ರಂತೆ ಮತ್ತು UGC ನಿಗದಿಪಡಿಸಿದ ವಿದ್ಯಾರ್ಹತೆ ಹೊಂದದವರಿಗೆ 16 ಗಂಟೆಗಿಂತ ಕಡಿಮೆ ಕಾರ್ಯಭಾರ/ 20 ಗಂಟೆಗಿಂತ ಕಡಿಮೆ ಕಾರ್ಯಭಾರ ಇದ್ದ ಪಕ್ಷದಲ್ಲಿ ಪ್ರತಿ ಗಂಟೆಯ ಬೋಧನಾ ಅವಧಿಗೆ ರೂ. 600/- ರಂತೆ ಸಂಭಾವನೆ ಪಾವತಿಮಾಡಲಾಗುವುದು.
5. ವಿಶ್ವವಿದ್ಯಾನಿಲಯವು ವಹಿಸುವ ಇತರ ಕಾರ್ಯಗಳಲ್ಲಿ ತೊಡಗಿಸಿಕೊಳ್ಳಲು ಬದ್ಧರಿರತಕ್ಕದ್ದು.
6. **ಅವಶ್ಯಕತೆ ಇದ್ದಲ್ಲಿ ಮಾತ್ರ ಅತಿಥಿ ಉಪನ್ಯಾಸಕರನ್ನು ಆಯ್ಕೆ ಮಾಡುವ ಅಧಿಕಾರವನ್ನು ವಿಶ್ವವಿದ್ಯಾನಿಲಯ ಕಾದಿರಿಸಿದೆ.**
7. ಅಭ್ಯರ್ಥಿಗಳು Onlineನಲ್ಲಿ upload ಮಾಡಿದ ಅರ್ಜಿ ಹಾಗೂ ಮೂಲದಾಖಲೆಗಳ ಪ್ರತಿಯನ್ನು ಸಂದರ್ಶನ ದಿನದಂದು ಕಡ್ಡಾಯವಾಗಿ ತರತಕ್ಕದ್ದು.
8. ~~ಆಯ್ಕೆಯಾದ ಅಭ್ಯರ್ಥಿಗಳು ಮಂಗಳೂರು ವಿಶ್ವವಿದ್ಯಾನಿಲಯದ ಯಾವುದೇ ಘಟಕ ಕಾಲೇಜುಗಳಲ್ಲಿ ಸೇವೆ ಸಲ್ಲಿಸಲು~~ ಸಿದ್ಧರಿರಬೇಕು.

24/9.
ಕುಲಸಚಿವರು

ರಿಗೆ:

ನಿರ್ದೇಶಕರು, ಗಣಕಯಂತ್ರ ಕೇಂದ್ರ, ಮಂಗಳೂರು ವಿಶ್ವವಿದ್ಯಾನಿಲಯ, ಮಂಗಳಗಂಗೋತ್ರಿ- ಸಂದರ್ಶನದ ಅಧಿಸೂಚನೆಯನ್ನು ವಿಶ್ವವಿದ್ಯಾನಿಲಯದ ವೆಬ್‌ಸೈಟ್ ನಲ್ಲಿ ಪ್ರಕಟಿಸಲು ಕೋರಲಾಗಿದೆ.